ಕರ್ನಾಟಕ ವಿಧಾನಸಭೆ

(15ನೇ ವಿಧಾನಸಭೆ)

ಹನ್ನೆರಡನೇ ಅಧಿವೇಶನ

ಕಾರ್ಯಕಲಾಪಗಳ ಪಟ್ಟಿ

ಸೋಮವಾರ, ದಿನಾಂಕ 21ನೇ ಮಾರ್ಚ್, 2022

(ಸಮಯ: ಬೆಳಿಗ್ಗೆ 11.00 ಗಂಟೆಗೆ)

-----

1. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಇಪ್ಪತ್ತನೇ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಇಪ್ಪತ್ತನೇ ಪಟ್ಟಿ

2. ವರದಿಯನ್ನೊಪ್ಪಿಸುವುದು

ಶ್ರೀ ಕೆ. ರಘುಪತಿ ಭಟ್ (ಮಾನ್ಯ ಅಧ್ಯಕ್ಷರು, ಸರ್ಕಾರಿ ಭರವಸೆಗಳ ಸಮಿತಿ) ಅವರು ಕರ್ನಾಟಕ ವಿಧಾನ ಸಭೆಯ ಸರ್ಕಾರಿ ಭರವಸೆಗಳ ಸಮಿತಿಯ 2020-2021ನೇ ಸಾಲಿನ ಹನ್ನೆರಡನೇ ವರದಿಯನ್ನೊಪ್ಪಿಸುವುದು.

3. ಶಾಸನ ರಚನೆ

ವಿಧೇಯಕವನ್ನು ಮಂಡಿಸುವುದು

ಶ್ರೀ ಕೆ.ಎಸ್. ಈಶ್ವರಪ್ಪ (ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು) ಅವರು:-

ಅ) 2022ನೇ ಸಾಲಿನ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು;

ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

4. ವಿತ್ತೀಯ ಕಾರ್ಯಕಲಾಪ

2022-23ನೇ ಸಾಲಿನ ಈ ಕೆಳಕಂಡ ಅನುದಾನ ಬೇಡಿಕೆಗಳ ಮೇಲೆ ಚರ್ಚೆ (ಮೂರನೇ ದಿನ).

ಅಭಿಯಾಚನೆ ಸಂಖ್ಯೆ	ಅಭಿಯಾಚನೆಯ ಹೆಸರು
01	ಕೃಷಿ ಮತ್ತು ತೋಟಗಾರಿಕೆ
05	ಒಳಾಡಳಿತ ಮತ್ತು ಸಾರಿಗೆ
07	ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್
10	ಸಮಾಜ ಕಲ್ಯಾಣ
11	ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ
14	ಕಂದಾಯ

... 2/

20	ಲೋಕೋಪಯೋಗಿ
21	ಜಲಸಂಪನ್ಮೂಲ
23	ಕಾರ್ಮಿಕ ಮತ್ತು ಕೌಶಲ್ಯಾಭಿವೃದ್ಧಿ
08	ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ
09	ಸಹಕಾರ
13	ಆಹಾರ ಮತ್ತು ನಾಗರಿಕ ಸರಬರಾಜು
22	ಆರೋಗ್ಯ ಮತ್ತು ಕುಟುಂಬ ಕಲ್ಯಾಣ
24	ಇಂಧನ

5. ಶಾಸನ ರಚನೆ

ವಿಧೇಯಕಗಳನ್ನು ಪರ್ಯಾಲೋಚಿಸುವುದು ಮತ್ತು ಅಂಗೀಕರಿಸುವುದು

1. **ಶ್ರೀ ಆರಗ ಜ್ಞಾನೇಂದ್ರ (ಮಾನ್ಯ ಗೃಹ ಸಚಿವರು) ಅವರು:-**

ಅ) 2022ನೇ ಸಾಲಿನ ಕರ್ನಾಟಕ ಬಂದೀಖಾನೆಗಳ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

2. **ಶ್ರೀ ಮುರುಗೇಶ್ ಆರ್. ನಿರಾಣಿ (ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವರು) ಅವರು:-**

ಅ) 2022ನೇ ಸಾಲಿನ ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

6. ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯಗಳ ಬಗ್ಗೆ ಅಲ್ಪ ಕಾಲಾವಧಿ ಚರ್ಚೆ

1) **ಶ್ರೀಯುತರುಗಳಾದ ಹೆಚ್.ಡಿ. ಕುಮಾರಸ್ವಾಮಿ, ಎಂ. ಕೃಷ್ಣಾರೆಡ್ಡಿ, ಸುರೇಶ್‌ಗೌಡ, ವೆಂಕಟರಾವ್ ನಾಡಗೌಡ, ಬಂಡೆಪ್ಪ ಖಾಶೆಂಪೂರ್ ಹಾಗೂ ಇತರರು** – ರಾಜ್ಯದಲ್ಲಿ ನಡೆದ ಹಲವಾರು ಅಹಿತಕರ ಘಟನೆಗಳಿಂದ ಶಾಲಾ ಕಾಲೇಜುಗಳಲ್ಲಿ ವಿದ್ಯಾಭ್ಯಾಸ ಮಾಡಲು ಸಾಧ್ಯವಾಗದ ಪರಿಸ್ಥಿತಿ ಉಂಟಾಗಿದ್ದು, ಕಾನೂನು ಮತ್ತು ಸುವ್ಯವಸ್ಥೆಗೆ ಭಂಗ ಉಂಟಾಗಿರುವ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ.

2) **ಶ್ರೀಯುತರುಗಳಾದ ಕೆ.ಎಸ್. ಲಿಂಗೇಶ್, ಹೆಚ್.ಕೆ. ಕುಮಾರಸ್ವಾಮಿ, ಎಂ.ಪಿ. ಕುಮಾರಸ್ವಾಮಿ ಹಾಗೂ ಸಿ.ಎನ್. ಬಾಲಕೃಷ್ಣ ಇವರುಗಳು** – ರಾಜ್ಯದಲ್ಲಿನ ವಿವಿಧ ಭಾಗಗಳಲ್ಲಿ ಕಾಡಾನೆಗಳು ಹಾಗೂ ಇತರೆ ಕಾಡು ಪ್ರಾಣಿಗಳ ಹಾವಳಿಯಿಂದ ಉಂಟಾಗಿರುವ ಸಮಸ್ಯೆ ಹಾಗೂ ಪರಿಹಾರೋಪಾಯಗಳ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ.

... 3/

3) **ಶ್ರೀಯುತರುಗಳಾದ ಪಿ. ರಾಜೀವ್, ಎನ್. ಮಹೇಶ್, ಗೂಳಿಹಟ್ಟಿ ಡಿ. ಶೇಖರ್, ಎಂ. ಚಂದ್ರಪ್ಪ ಹಾಗೂ ಇತರರು** – ರಾಜ್ಯದಲ್ಲಿ ಬೇಡ ಜಂಗಮ ಮತ್ತು ಬುಡಗ ಜಂಗಮ ಜಾತಿಯ ಜನಾಂಗದವರಿಗೆ ಪರಿಶಿಷ್ಟ ಜಾತಿ ಪ್ರಮಾಣ ಪತ್ರ ನೀಡುತ್ತಿರುವುದರಿಂದ ಅರ್ಹ ಪರಿಶಿಷ್ಟ ಜಾತಿ ಜನಾಂಗದವರು ಮೀಸಲಾತಿಯಿಂದ ವಂಚಿತರಾಗುತ್ತಿರುವ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ.

4) **ಶ್ರೀಯುತರುಗಳಾದ ಸಿದ್ದರಾಮಯ್ಯ, ಡಾ. ಅಜಯ್ ಧರ್ಮಸಿಂಗ್, ಎಂ.ಬಿ. ಪಾಟೀಲ್, ಡಿ.ಕೆ. ಶಿವಕುಮಾರ್, ಕೃಷ್ಣ ಬೈರೇಗೌಡ ಹಾಗೂ ಇತರರು** – ರಾಜ್ಯದಲ್ಲಿ ಇತ್ತೀಚೆಗೆ ಸಂಭವಿಸುತ್ತಿರುವ ವಿದ್ಯಮಾನಗಳಿಂದ ಕುಸಿದು ಬೀಳುತ್ತಿರುವ ಕಾನೂನು ಸುವ್ಯವಸ್ಥೆಯನ್ನು ಸರಿಪಡಿಸುವ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ.

7. ಗಮನ ಸೆಳೆಯುವ ಸೂಚನೆಗಳು

1) **ಶ್ರೀ ಪ್ರಿಯಾಂಕ ಖರ್ಗೆ ಅವರು** – ಚಿತ್ತಾಪುರ ತಾಲ್ಲೂಕಿನಿಂದ ಬೇರ್ಪಡಿಸಿ ಹೊಸದಾಗಿ ಎರಡು ತಾಲ್ಲೂಕುಗಳನ್ನಾಗಿ ರಚಿಸುವಾಗ ಬಹಳಷ್ಟು ಹಳ್ಳಿಗಳನ್ನು ಅವೈಜ್ಞಾನಿಕವಾಗಿ ಪುನರ್ ವಿಂಗಡನೆ ಮಾಡಿ ಸದರಿ ನೂತನ ತಾಲ್ಲೂಕುಗಳಿಗೆ ಸೇರಿಸಿರುವುದರಿಂದ ಅಲ್ಲಿನ ಸಾರ್ವಜನಿಕರಿಗೆ ತೊಂದರೆಯಾಗಿರುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

2) **ಶ್ರೀ ಎಲ್. ನಾಗೇಂದ್ರ ಅವರು** – ಮೈಸೂರು ಮಹಾನಗರ ಪಾಲಿಕೆ ವತಿಯಿಂದ ಕುಡಿಯುವ ನೀರಿನ ಬಾಕಿ ಮೊತ್ತದ ಮೇಲೆ ವಿಧಿಸಲಾಗುತ್ತಿರುವ ಬಡ್ಡಿ ದರದಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದರಿಂದ ನೀರಿನ ಕಂದಾಯದ ಬಡ್ಡಿಯನ್ನು ಮನ್ನಾ ಮಾಡುವ ಬಗ್ಗೆ ಮಾನ್ಯ ನಗರಾಭಿವೃದ್ಧಿ ಸಚಿವರ ಗಮನ ಸೆಳೆಯುವುದು.

3) **ಶ್ರೀ ಎಂ.ಎಸ್. ಸೋಮಲಿಂಗಪ್ಪ ಅವರು** – ಬಳ್ಳಾರಿ ಜಿಲ್ಲೆಯ ಸಿರುಗುಪ್ಪ ತಾಲ್ಲೂಕಿನ ನಿಟ್ಟೂರು ಹಾಗೂ ರಾಯಚೂರು ಜಿಲ್ಲೆಯ ಸಿಂಧನೂರು ತಾಲ್ಲೂಕಿನ ಸಿಂಗಾಪುರ ಗ್ರಾಮಗಳ ಹತ್ತಿರ ಹರಿಯುವ ತುಂಗಭದ್ರಾ ನದಿಗೆ ಅಡ್ಡಲಾಗಿ ಸೇತುವೆ ನಿರ್ಮಾಣ ಮಾಡಲು ಸಿ.ಆರ್.ಎಫ್. ಯೋಜನೆಯಡಿ ಮಂಜೂರಾತಿ ನೀಡಿರುವ ಕಾಮಗಾರಿಯನ್ನು ಶೀಘ್ರವಾಗಿ ಪ್ರಾರಂಭಿಸುವ ಬಗ್ಗೆ ಮಾನ್ಯ ಲೋಕೋಪಯೋಗಿ ಸಚಿವರ ಗಮನ ಸೆಳೆಯುವುದು.

4) **ಶ್ರೀ ಎಸ್.ಎನ್. ಸುಬ್ಬಾರೆಡ್ಡಿ ಅವರು** – ಚಿಕ್ಕಬಳ್ಳಾಪುರ ಜಿಲ್ಲೆಯ ಬಾಗೇಪಲ್ಲಿ ತಾಲ್ಲೂಕಿನ ಪಾತಪಾಳ್ಯ ಘಂಟಲಮಲ್ಲಮ್ಮ ಕಣಿವೆಯ ಬಳಿ ಬ್ಯಾರೇಜ್ ನಿರ್ಮಾಣ ಕಾಮಗಾರಿಯನ್ನು ಅನುಷ್ಠಾನಗೊಳಿಸಲು ವಿಳಂಬ ಮಾಡುತ್ತಿರುವ ಅಧಿಕಾರಿಗಳ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳುವ ಬಗ್ಗೆ ಹಾಗೂ ಶೀಘ್ರವಾಗಿ ಕಾಮಗಾರಿಯನ್ನು ಪ್ರಾರಂಭಿಸುವ ಬಗ್ಗೆ ಮಾನ್ಯ ಜಲಸಂಪನ್ಮೂಲ ಸಚಿವರ ಗಮನ ಸೆಳೆಯುವುದು.

5) **ಶ್ರೀ ಎಸ್.ಎನ್. ನಾರಾಯಣಸ್ವಾಮಿ ಕೆ.ಎಂ. ಅವರು** – ರಾಜ್ಯದಲ್ಲಿ ತಹಶೀಲ್ದಾರ್ ಗ್ರೇಡ್–1, ಗ್ರೇಡ್–2 ರಲ್ಲಿ ಕಾರ್ಯನಿರ್ವಹಿಸುತ್ತಿರುವ ಸಚಿವಾಲಯದ ಸಿಬ್ಬಂದಿಗಳನ್ನು ಹಿಂಪಡೆಯದೇ ಇರುವುದರಿಂದ ಕೆ.ಎ.ಎಸ್. ತರಬೇತಿ ಮುಗಿಸಿ ಸ್ಥಳ ನಿಯೋಜನೆಗಾಗಿ ಕಾಯುತ್ತಿರುವವರಿಗೆ ತೊಂದರೆಯಾಗುತ್ತಿರುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

... 4/

6) **ಶ್ರೀ ಕೆ.ಎಸ್. ಲಿಂಗೇಶ್ ಅವರು** – ತುಮಕೂರು ವಿಶ್ವವಿದ್ಯಾನಿಲಯದಲ್ಲಿ ಸ್ಥಾಪಿಸಲಾಗಿರುವ ನೊಳಂಬ ಅಧ್ಯಯನ ಪೀಠವು ಕಾರ್ಯನಿರ್ವಹಿಸಲು ಹೆಚ್ಚಿನ ಅನುದಾನವನ್ನು ಬಿಡುಗಡೆ ಮಾಡುವ ಬಗ್ಗೆ ಮಾನ್ಯ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ ಸಚಿವರ ಗಮನ ಸೆಳೆಯುವುದು.

7) **ಶ್ರೀ ಸುರೇಶ್ ಗೌಡ ಅವರು** – ಗುಡ್ಡೇ ಹೊಸಳ್ಳಿ ಹತ್ತಿರ ಹೇಮಾವತಿ ನದಿ ನೀರನ್ನು ಏತ ನೀರಾವರಿ ಮುಖಾಂತರ ಕೆ.ಆರ್.ಪೇಟೆ, ನಾಗಮಂಗಲ ಮತ್ತು ಚನ್ನರಾಯಪಟ್ಟಣ ತಾಲ್ಲೂಕುಗಳಲ್ಲಿರುವ ಕೆರೆಗಳಿಗೆ ನೀರನ್ನು ತುಂಬಿಸುವ ಯೋಜನೆಯ ಗುತ್ತಿಗೆ ಅವಧಿ ಮುಗಿದು ಹೋಗಿದ್ದು, ಕಾಮಗಾರಿಯನ್ನು ಪೂರ್ಣಗೊಳಿಸದೆ ಇರುವ ಗುತ್ತಿಗೆದಾರನ ವಿರುದ್ಧ ಕ್ರಮ ಕೈಗೊಳ್ಳುವ ಬಗ್ಗೆ ಮಾನ್ಯ ಜಲಸಂಪನ್ಮೂಲ ಸಚಿವರ ಗಮನ ಸೆಳೆಯುವುದು.

8) **ಶ್ರೀ ಕೆ. ರಘುಪತಿ ಭಟ್ ಅವರು** – ಭೂ ಪರಿವರ್ತಿತ ಜಮೀನುಗಳಲ್ಲಿ ಬಡಾವಣೆಗಾಗಿ ವಿನ್ಯಾಸ ಅನುಮೋದನೆ ಪಡೆಯಲು ಸ್ಥಳೀಯ ಪ್ರಾಧಿಕಾರವು ಅನುಮತಿ ನೀಡುವ ಮೊದಲು ಪಟ್ಟಣ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶಕರ ಅಥವಾ ನಗರ ಯೋಜನೆ ಸಹಾಯಕ ನಿರ್ದೇಶಕರ ಪೂರ್ವಾನುಮೋದನೆ ಪಡೆಯಬೇಕೆಂದು ಹೊರಡಿಸಿರುವ ಅಧಿಸೂಚನೆಯಿಂದ ಸಾರ್ವಜನಿಕ ಸೇವೆಗಳು ವಿಳಂಬವಾಗುತ್ತಿರುವುದರಿಂದ ಹಿಂದಿನ ರೀತಿಯಲ್ಲಿಯೇ ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿ ಜಿಲ್ಲಾ ಪಂಚಾಯತ್‌ನಿಂದ ನೇಮಿಸಲ್ಪಟ್ಟ ಸ್ಥಳೀಯ ನೊಂದಾಯಿತ ಆರ್ಕಿಟೆಕ್ಟ್‌ಗಳೇ ವಿನ್ಯಾಸ ನಕ್ಷೆ ಅನುಮೋದನೆ ನೀಡಲು ಅವಕಾಶ ಕಲ್ಪಿಸುವ ಬಗ್ಗೆ ಮಾನ್ಯ ನಗರಾಭಿವೃದ್ಧಿ ಸಚಿವರ ಗಮನ ಸೆಳೆಯುವುದು.

9) **ಶ್ರೀ ಲಾಲಾಜಿ ಆರ್. ಮೆಂಡನ್ ಅವರು** – ಕಾಪು ವಿಧಾನಸಭಾ ಕ್ಷೇತ್ರದ ಪಡುಬಿದ್ರಿ ಗ್ರಾಮದಲ್ಲಿ ಸುಝಲಾನ್ ಸಂಸ್ಥೆಯ ಅನುಪಯುಕ್ತ ಜಾಗವನ್ನು ಕಸ ವಿಲೇವಾರಿ ಮಾಡಲು ಪಡುಬಿದ್ರಿ ಗ್ರಾಮ ಪಂಚಾಯತ್‌ಗೆ ಹಸ್ತಾಂತರಿಸುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

10) **ಶ್ರೀ ವೀರಭದ್ರಯ್ಯ (ವೀರಣ್ಣ) ಚರಂತಿಮಠ ಅವರು** – 1998ನೇ ಸಾಲಿನ ಗೆಜೆಟೆಡ್ ಪ್ರೊಬೆಷನರ್ಸ್ ನೇಮಕಾತಿ ಪ್ರಕ್ರಿಯೆಗೆ ಸಂಬಂಧಿಸಿದಂತೆ ಮಾನ್ಯ ಉಚ್ಚ ನ್ಯಾಯಾಲಯದ ತೀರ್ಮಾನದನ್ವಯ 2006ರಲ್ಲಿ ಪ್ರಕಟಿಸಲಾದ ಅಭ್ಯರ್ಥಿಗಳ ಅಂತಿಮ ಆಯ್ಕೆ ಪಟ್ಟಿ ಹಾಗೂ ನಂತರ 2014 ಮತ್ತು 2019ರಲ್ಲಿ ಮರುಪ್ರಕಟಿಸಲಾದ ಆಯ್ಕೆ ಪಟ್ಟಿಗಳಲ್ಲಿ ಬದಲಾವಣೆ ಇರುವುದರಿಂದ ನಿವೃತ್ತಿ ಅಂಚಿನಲ್ಲಿರುವ ಅಭ್ಯರ್ಥಿಗಳನ್ನು ಈಗ ಅವರುಗಳು ಕಾರ್ಯನಿರ್ವಹಿಸುತ್ತಿರುವ ಇಲಾಖೆಯಲ್ಲಿಯೇ ಸೂಪರ್‌ನ್ಯೂಮರಿ ಹುದ್ದೆ ಸೃಜಿಸಿ ಮುಂದುವರೆಸುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

ಎಂ.ಕೆ.ವಿಶಾಲಾಕ್ಷಿ
ಕಾರ್ಯದರ್ಶಿ(ಪ್ರ)

ವಿಧಾನಸಭೆಯ ಕಾರ್ಯಕಲಾಪಗಳ ಪಟ್ಟಿಯನ್ನು ಅಂತರ್ಜಾಲದ ಈ ವಿಳಾಸದಲ್ಲಿ ಪಡೆದುಕೊಳ್ಳಬಹುದು
http://kla.kar.nic.in/assembly/lob/lob.htm